ಅತಿವೃಷ್ಟಿಯಿಂದ ಹಾನಿಯಾದ ಫಲಾನುಭವಿಗಳಿಗೆ ಪರಿಹಾರ ಬಿಡುಗಡೆಗೊಳಿಸುವುದು

907 (1142); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಚಿಂಚೋಳಿ ತಾಲ್ಲೂಕಿನ 2014ನೇ ಸಾಲಿನಲ್ಲಿ ಅತಿವೃಷ್ಟಿಯಿಂದಾಗಿ ಅಪಾರ ಪ್ರಮಾಣದ ಬೆಳೆಗಳು ಹಾನಿಯಾಗಿರುವುದರಿಂದ ರೈತರು ಬಹಳ ನಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಬೆಳೆ ಹಾನಿಯಿಂದ ನಷ್ಟಕ್ಕೆ ಈಡಾಗಿರುವ ರೈತರುಗಳಿಗೆ ಪರಿಹಾರ ನೀಡಲು ಕೈಗೊಂಡ ಕ್ರಮವೇನು? (ವಿವರ ನೀಡುವುದು)

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಬಂದಿದೆ.

ಆ) 2014–15ನೇ ಸಾಲಿನಲ್ಲಿ ಮಳೆಯಿಂದ ಹಾನಿಯಾದ ಬೆಳೆಗಳ ಜಂಟಿ ಸಮೀಕ್ಷೆ ವರದಿ ಪ್ರಕಾರ 4,742 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಯಾಗಿದ್ದು, ಹಾನಿಗೊಳಗಾದ ಸಂತ್ರಸ್ಥ ರೈತರಿಗೆ ಕೇಂದ್ರ ಸರ್ಕಾರದ ಎನ್‌ಡಿಆರ್‌ಎಫ್/ಎಸ್‌ಡಿಆರ್‌ಎಫ್ ಮಾರ್ಗಸೂಚಿ ಪ್ರಕಾರ ₹ 226.00 ಲಕ್ಷಗಳ ಪರಿಹಾರ ವಿತರಿಸಲಾಗಿದೆ.

11ಇ ರೆವಿನ್ಯೂ ನಕ್ಷೆ

908 (1553); ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು)

ಅ) 2013–14 ಮತ್ತು 2014–15 ನೇ ಸಾಲಿನ ಡಿಸೆಂಬರ್ ತಿಂಗಳವರೆಗೆ ಕುಂದಾಪುರ ತಹಶೀಲ್ದಾರ್ ಕಛೇರಿ ಮತ್ತು ಬೈಂದೂರು ವಿಶೇಷ ತಹಶೀಲ್ದಾರ್ ಕಛೇರಿ ವ್ಯಾಪ್ತಿಯಲ್ಲಿ 11ಎ ರೆವಿನ್ಯೂ ನಕ್ಷೆಗೆ ಎಷ್ಟು ಅರ್ಜಿಗಳು ಬಂದಿವೆ; (ವಿವರ ನೀಡುವುದು)

ಆ) ಇವುಗಳಲ್ಲಿ ಎಷ್ಟು ವಿಲೇ ಆಗಿವೆ; ಎಷ್ಟು ಅರ್ಜಿಗಳು ಬಾಕಿ ಇವೆ;

ಇ) ಅರ್ಜಿಗಳು ಬಾಕಿ ಇರುವುದರಿಂದ ಜನ ಸಾಮಾನ್ಯರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) 2013–14 ಮತ್ತು 2014–15 ನೇ ಸಾಲಿನ ಡಿಸೆಂಬರ್ ತಿಂಗಳವರೆಗೆ ಕುಂದಾಪುರ ಮತ್ತು ಬೈಂದೂರು ವಿಶೇಷ ತಹಶೀಲ್ದಾರ್ ಕಛೇರಿ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ ಮೋಜಿಣಿ ಆವೃತ್ತಿ 1 ಮತ್ತು 2 ರಲ್ಲಿ ಒಟ್ಟು 9428 11ಇ ಅರ್ಜಿಗಳು ಬಂದಿವೆ.

2013-14 (01/01/2013 to 31/12/2013	**Taluk**	**OB**	**Receipt**	**Disposal**	**Balance**
ಕುಂದಾಪುರ	ಕುಂದಾಪುರ	2067	3763	3213	2617
ಕುಂದಾಪುರ	ಬೈಂದೂರು	759	1468	879	1348
		2826	**5231**	**4092**	**3965**
2014-15 (01/01/2014 to 31/12/2014	**Taluk**	**OB**	**Receipt**	**Disposal**	**Balance**
ಕುಂದಾಪುರ	ಕುಂದಾಪುರ	2617	3004	2354	3267
ಕುಂದಾಪುರ	ಬೈಂದೂರು	1348	1193	861	1680
		3965	**4197**	**3215**	**4947**

ಆ) 7307 ಅರ್ಜಿಗಳು ವಿಲೇಯಾಗಿವೆ. 8912 ಅರ್ಜಿಗಳು ಬಾಕಿ ಇರುತ್ತವೆ.

ಇ) ಬಂದಿದೆ.

ಈ ಸಂಬಂಧ 2015ರ ಫೆಬ್ರವರಿ ತಿಂಗಳಲ್ಲಿ ಬಾಕಿ ಇರುವ ಎಲ್ಲಾ 11ಇ ಅರ್ಜಿಗಳನ್ನು ಏಕಕಾಲದಲ್ಲಿ ರಾಜ್ಯಾದ್ಯಂತ ಅಳತೆ ಆಡಿ ವಿಲೇಗೊಳಿಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಹೊಸದಾಗಿ ಒಳಾಂಗಣ ಕ್ರೀಡಾಂಗಣ ನಿರ್ಮಿಸುವುದು

909 (365); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ಬೆಂಗಳೂರಿನಲ್ಲಿ ಎಲ್ಲೆಲ್ಲಿ ಒಳಾಂಗಣ ಕ್ರೀಡಾಂಗಣ (ಸ್ಟೇಡಿಯಂ) ನಿರ್ಮಿಸಲಾಗಿದೆ;

ಆ) 2014–15 ನೇ ಸಾಲಿನಲ್ಲಿ ಹೊಸದಾಗಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲಾಗುತ್ತಿದೆಯೇ;

ಇ) ಬೆಂಗಳೂರು ಉತ್ತರ ಭಾಗದಲ್ಲಿ ಹೊಸದಾಗಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಉದ್ದೇಶಿಸಲಾಗಿದೆಯೇ?

ಶ್ರೀ ಕೆ. ಅಭಯ ಚಂದ್ರ (ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು)

ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣ ಸಂಕೀರ್ಣದಲ್ಲಿ ಹಾಗೂ ಬೆಂಗಳೂರಿನ ಕೋರಮಂಗಲದಲ್ಲಿ ಒಳಾಂಗಣ ಕ್ರೀಡಾಂಗಣವನ್ನು ನಿರ್ಮಿಸಲಾಗಿದೆ.

ಆ) 2014–15 ನೇ ಸಾಲಿನಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲಾಗುತ್ತಿದೆ.